ಪ್ರಜಾವಾಣಿ
ಕರ್ನಾಟಕದ ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

**Friday 20th December 2024, Page No. 3B**

## At the convocation of RV Engineering College, degrees were awarded to 318 postgraduate students.



ಆರ್‌.ವಿ. ಎಂಜಿನಿಯರಿಂಗ್ ಕಾಲೇಜಿನ ಘಟಿಕೋತ್ಸವದಲ್ಲಿ 318 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು

# 318 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ

**ಕೆಂಗೇರಿ:** ಆರ್‌.ವಿ ಎಂಜಿನಿಯರಿಂಗ್ ಕಾಲೇಜಿನ ಘಟಿಕೋತ್ಸವದಲ್ಲಿ 209 ಸ್ನಾತಕೋತ್ತರ ಎಂಜಿನಿಯರಿಂಗ್ ಮತ್ತು ಸ್ನಾತಕೋತ್ತರ ಕಂಪ್ಯೂಟರ್ ಅಪ್ಲಿಕೇಷನ್ಸ್ ಕೋರ್ಸ್‌ನ 109 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು.

ಕರ್ನಾಟಕ ರಾಜ್ಯ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ಆರ್‌.ಪರಶುರಾಮನ್, ‘ತಂತ್ರಜ್ಞಾನ ಕ್ಷೇತ್ರದಲ್ಲಿ ಅತಿ ವೇಗವಾಗಿ ಬೆಳೆಯುತ್ತಿರುವ ಭಾರತವು ಪರ್ವ ಕಾಲದಲ್ಲಿದೆ. ದೇಶೀಯ ಕೈಗಾರಿಕೆಗಳಿಗೆ ಉತ್ತೇಜನ ನೀಡುತ್ತಿರುವ ‘ಮೇಕ್ ಇನ್ ಇಂಡಿಯಾ’ದಂತಹ ಯೋಜನೆಗಳು ನವ ಉದ್ಯಮ ಹಾಗೂ ಉದ್ಯಮಿಗಳಿಗೆ ಪ್ರೋತ್ಸಾಹದಾಯಕವಾಗಿದೆ’ ಎಂದರು.

‘ಸಂಶೋಧನೆ ಮೂಲಕ ತಾಂತ್ರಿಕ ಕ್ಷೇತ್ರದಲ್ಲಿ ಆಮೂಲಾಗ್ರ ಬದಲಾವಣೆಗೆ ಇದು ಅಮೃತ ಕಾಲ. ವಿದ್ಯಾರ್ಥಿಗಳು ಪರಿಶ್ರಮ ಹಾಗೂ ನಿರ್ದಿಷ್ಟ ಗುರಿಯೊಂದಿಗೆ ಸಂಶೋಧನೆಗೆ ಮುಂದಾಗಬೇಕು’ ಎಂದು ಸಲಹೆ ಮಾಡಿದರು.

ಎಂಜಿನಿಯರಿಂಗ್ ವಿಭಾಗದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿ-ಗಳಿಗೆ ಚಿನ್ನ, ಬೆಳ್ಳಿ ಪದಕ ನೀಡಿ ಗೌರವಿಸಲಾಯಿತು. ಶ್ರೇಷ್ಠ ಶೈಕ್ಷಣಿಕ ಸಾಧನೆಗಾಗಿ ‘ಹೈವೇ ತಂತ್ರಜ್ಞಾನ’ ವಿಭಾಗದ ವಿದ್ಯಾರ್ಥಿನಿ ಟಿ.ವೈ.ಪಾರ್ನಿಕಾ ಅವರಿಗೆ ಗೌರವ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಆರ್‌ಎಸ್‌ಎಸ್‌ಟಿ ಅಧ್ಯಕ್ಷ ಡಾ.ಎಂ.ಪಿ.ಶ್ಯಾಮ್, ಸಹಾಯಕ ಕಾರ್ಯದರ್ಶಿ ನಿಖಿಲ್ ಮೂರ್ತಿ, ಪ್ರಾಂಶುಪಾಲ ಎನ್‌.ಸುಬ್ರಮಣ್ಯ, ಉಪ ಪ್ರಾಂಶುಪಾಲರಾದ ಗೀತಾ ಉಪಸ್ಥಿತರಿದ್ದರು.

BC